# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –268 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:18–05–2025 ಭಾನುವಾರ | ಪುಟ: 4 | ಬೆಲೆ : ರೂ.2–00
Volume - 02 Issue - 268 | RNI No: KARKAN/2023/88462 | KA/SK/CTA-874/2024-2026 | Chitradurga | Date: 18-05-2025 Sunday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಗುಣಮಟ್ಟದ ವಿದ್ಯುತ್ ಪೂರೈಕೆಗೆ ಕ್ರಮ: ಸಚಿವ ಡಿ.ಸುಧಾಕರ್ 2

ಚಿತ್ರದುರ್ಗ–ದಾವಣಗೆರೆ ರಸ್ತೆಯ ರೈಲ್ವೆ ಗೇಟ್‌ಗೆ ಒಂದು ವಾರದೊಳಗೆ ಟೆಂಡರ್ 3

ಹಂಪಿಯನ್ನು ಕರ್ನಾಟಕ ಸಾಮ್ರಾಜ್ಯವೆಂದು ಬಣ್ಣಿಸಿ: ಡಾ. ವಸುಂಧರಾ ಫಿಲಿಯೋಜಾ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕಾಟಪ್ಪನಹಟ್ಟಿ ನವವಿವಾಹಿತೆ ಆತ್ಮಹತ್ಯೆ ಪ್ರಕರಣ: ಇಬ್ಬರ ಮೇಲೆ ದೂರು ದಾಖಲು

» **ಚಳ್ಳಕೆರೆ**

ನಗರದ ಕಾಟಪ್ಪನಹಟ್ಟಿಯಲ್ಲಿ ಬುಧವಾರ ಸಂಜೆ ನೇಣುಹಾಕಿಕೊಂಡು ಮೃತಪಟ್ಟ ಘಟನೆಗೆ ಸಂಬಂಧಪಟ್ಟಂತೆ ಮೃತಳ ತಾಯಿ ಗಂಗಮ್ಮ ಪೊಲೀಸರಿಗೆ ದೂರು ನೀಡಿದ್ದು, ನನ್ನ ಮಗಳ ಸಾವಿಗೆ ಗಂಡ ಹಾಗೂ ಆತನ ತಾಯಿ ಕಾರಣವೆಂದು ಪೊಲೀಸರಿಗೆ ದೂರು ನೀಡಿ ಕಾನೂನು ಕ್ರಮಜರುಗಿಸುವಂತೆ ಮನವಿ ಮಾಡಿದ್ದಾಳೆ. ಕಾಟಪ್ಪನಹಟ್ಟಿ ನಿವಾಸಿಯಾದ ಗಂಗಮ್ಮ ತನ್ನ ಮಗಳು ಟಿ.ಮಧುವನ್ನು ಬುಡ್ನಹಟ್ಟಿ ಗ್ರಾಮದ ಪ್ರೇಮಕುಮಾರ್(ಮಂಜುನಾಥ) ರವರಿಗೆ ಮದುವೆ ಮಾಡಿಕೊಟ್ಟಿದ್ದು, ಇಬ್ಬರೂ ಪ್ರೀತಿಸಿ ಇತ್ತೀಚಿಗೆ ಮದುವೆಯಾಗಿರುತ್ತಾರೆ. ಪ್ರೇಮಕುಮಾರ್ ದುಡಿಮೆ ಇಲ್ಲದ ಕಾರಣ ಹೆಂಡತಿ ಮೈಮೇಲಿದ್ದ ವಡವೆಗಳನ್ನು ಮಾರಿ ನಿತ್ಯ ಕುಡಿದು ಬಂದು ಮಧು ಮೇಲೆ ದೈಹಿಕ ಹಾಗೂ ಮಾನಸಿಕವಾಗಿ ಹಿಂಸೆ ನೀಡುತ್ತಿದ್ದ. ಇದರಿಂದ ನೊಂದ ಟಿ.ಮಧು ಮನೆಯಲ್ಲೇ ನೇಣುಹಾಕಿಕೊಂಡು ಮೃತಪಟ್ಟಿರುತ್ತಾಳೆ. ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಎರಡು ಬೈಕ್‌ಗಳ ನಡುವೆ ಡಿಕ್ಕಿ : ಬೈಕ್ ಸವಾರ ವಿಶ್ವನಾಥ ಚಿಕಿತ್ಸೆ ಫಲಕಾರಿಯಾಗದೆ ಸಾವು.

» **ಚಳ್ಳಕೆರೆ**

ಚಳ್ಳಕೆರೆ ಠಾಣಾ ವ್ಯಾಪ್ತಿಯ ಕರೀಕೆರೆ ವಿಶ್ವರಪುರ ಗ್ರಾಮದ ತಿರುವಿನಲ್ಲಿ ತಿಪ್ಪೇಸ್ವಾಮಿ ಎಂಬ ಬೈಕ್ ಸವಾರ ಎದುರಿಗೆ ಬಂದ ವಿಶ್ವನಾಥರವರಿಗೆ ಡಿಕ್ಕಿ ಪಡಿಸಿದ ಪರಿಣಾಮ ಬೈಕ್ ಸವಾರ ವಿಶ್ವನಾಥ(30) ತೀರ್ವವಾಗಿ ಗಾಯಗೊಂಡು ಸಾರ್ವಜನಿಕ ಆಸ್ಪತ್ರೆಗೆ ದಾಖಲಾಗಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದ್ದು ಅಲ್ಲಿ ಮೃತಪಟ್ಟಿದ್ದಾನೆ. ವಿಶ್ವನಾಥನ ಜೊತೆಗೆ ಪ್ರಯಾಣಿಸುತ್ತಿದ್ದ ಮಣಿಕಂಠ ಎಂಬ ವ್ಯಕ್ತಿಗೆ ಅಲ್ಪಸ್ವಲ್ಪ ಗಾಯಗಳಾಗಿರುತ್ತವೆ. ವಿಶ್ವನಾಥನ ಸಾವಿಗೆ ಕಾರಣವಾದ ಬೈಕ್ ಚಾಲಕ ತಿಪ್ಪೇಸ್ವಾಮಿ ವಿರುದ್ಧ ಮೃತ ತಂದೆ ನಾಗೇಂದ್ರಪ್ಪ ದೂರು ದಾಖಲಿಸಿದ್ದು ಎಎಸ್‌ಐ ಗೋವಿಂದರಾಜು ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ಕರ್ನಾಟಕ ವಿದ್ಯಾರ್ಥಿ ಒಕ್ಕೂಟ ಉದ್ಘಾಟನೆ ಇಂದು

» **ಚಿತ್ರದುರ್ಗ**

ನವಯಾನ ಬುದ್ಧ ಧಮ್ಮ ಸಂಘ, ಸಾಮಾಜಿಕ ಸಂಘರ್ಷ ಸಮಿತಿ, ಪ.ಜಾತಿ, ಪ.ಪಂ.ನೌಕರರ ಒಕ್ಕೂಟ, ಜಂಬೂದ್ವೀಪ ಕರ್ನಾಟಕ, ಅಂಬೇಡ್ಕರ್ ವಿಚಾರ ವೇದಿಕೆ, ನವಯಾನ ಬುದ್ಧ ಸಾಹಿತ್ಯ ಸಂಘ ವತಿಯಿಂದ ಇದೇ ಮೇ.18ರಂದು ಬೆಳಿಗ್ಗೆ 11ಕ್ಕೆ ನಗರದ ಪತ್ರಕರ್ತರ ಭವನದಲ್ಲಿ "ಕರ್ನಾಟಕ ವಿದ್ಯಾರ್ಥಿ ಒಕ್ಕೂಟ ರಾಜ್ಯ ಸಮಿತಿ ಉದ್ಘಾಟನಾ ಸಮಾರಂಭ ನಡೆಯಲಿದೆ. ಸರ್ಕಾರಿ ಕಲಾ ಕಾಲೇಜು ಪ್ರಾಂಶುಪಾಲ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಉದ್ಘಾಟನೆ ನೆರವೇರಿಸುವರು. ಎಸ್‌ಜೆಎಂ ಕಾನೂನು ಮಹಾವಿದ್ಯಾಲಯ ಪ್ರಾಧ್ಯಾಪಕರು ಹಾಗೂ ಕರ್ನಾಟಕ ಒಕ್ಕೂಟ ರಾಜ್ಯ ಸಮಿತಿ ಅಧ್ಯಕ್ಷ ಎಂ.ರಮೇಶ್ ಅಧ್ಯಕ್ಷತೆ ವಹಿಸುವರು. ವಿಚಾರಗೋಷ್ಠಿ–1 ಮಧ್ಯಾಹ್ನ 12.15 ರಿಂದ 1.15 ರವರೆಗೆ ನಡೆಯಲಿದ್ದು, ಸಮಕಾಲೀನ ಸವಾಲುಗಳು ಮತ್ತು ವಿದ್ಯಾರ್ಥಿಗಳು ವಿಷಯ ಕುರಿತು ನಿವೃತ್ತ ಪ್ರಾಚಾರ್ಯ ಡಾ.ವಿ.ಬಸವರಾಜು ವಿಷಯ ಮಂಡನೆ ಮಾಡುವರು. ಸರ್ಕಾರಿ ಕಲಾ ಕಾಲೇಜು (ಸ್ವಾಯತ್ತ) ಅರ್ಥಶಾಸ್ತ್ರ ವಿಭಾಗದ ಡಾ.ವಿ.ಪ್ರಸಾದ್ ಅಧ್ಯಕ್ಷತೆ ವಹಿಸುವರು. ವಿಚಾರಗೋಷ್ಠಿ–2 ಮಧ್ಯಾಹ್ನ 1.15 ರಿಂದ 2.15 ರವರೆಗೆ ವಿಜ್ಞಾನ–ಮೂಢನಂಬಿಕೆ ವಿಷಯದ ಕುರಿತು ವಿಜ್ಞಾನಿ ಡಾ.ಕೆ.ರಾಜಶೇಖರ್ ವಿಷಯ ಮಂಡನೆ ಮಾಡುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ್ ಅಧ್ಯಕ್ಷತೆ ವಹಿಸುವರು. ಮಧ್ಯಾಹ್ನ 3 ರಿಂದ ಸಮಾರೋಪ ಸಮಾರಂಭ ನಡೆಲಿದ್ದು, ನವಯಾನ ಬುದ್ಧ ಧಮ್ಮ ಸಂಘದ ಪ್ರೊ..ಸಿ.ಕೆ. ಮಹೇಶ್ವರಪ್ಪ ಸಮಾರೋಪ ನುಡಿಗಳನ್ನಾಡುವರು. ನಿವೃತ್ತ ಉಪವಿಭಾಗಾಧಿಕಾರಿ ಎಂ.ಮಲ್ಲಿಕಾರ್ಜುನ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

**ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿಕೆ**

# 2027ರ ಡಿಸೆಂಬರ್ ಅಂತ್ಯಕ್ಕೆ ದಾವಣಗೆರೆ–ಚಿತ್ರದುರ್ಗ–ತುಮಕೂರು ರೈಲು ಮಾರ್ಗ ಪೂರ್ಣ

» **ಚಿತ್ರದುರ್ಗ**

ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೆ ಯೋಜನೆಯನ್ನು 2027ರ ಡಿಸೆಂಬರ್ ಅಂತ್ಯಕ್ಕೆ ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ದಾವಣಗೆರೆ–ಚಿತ್ರದುರ್ಗ–ತುಮಕೂರು ನೂತನ ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ 20 ರಿಂದ 30 ವರ್ಷಗಳವರೆಗೆ ದೇಶದಲ್ಲಿ ನೆನೆಗುದಿಗೆ ಬಿದ್ದಿರುವ ಎಲ್ಲ 7.25 ಲಕ್ಷ ಯೋಜನೆಗಳಿದ್ದವು, ಈ ಯೋಜನೆಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸುತ್ತಿದ್ದೇವೆ. 33 ಸಾವಿರ ಕೋಟಿ ರೂಪಾಯಿಗಳ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಹೇಳಿದರು.

ದೇಶಅಭಿವೃದ್ಧಿಯಾಗಬೇಕಾದರೆದೇಶದ ಎಲ್ಲ ರಾಜ್ಯಗಳು ಅಭಿವೃದ್ಧಿಯಾಗಬೇಕು ಎಂಬುದು ಪ್ರಧಾನಿ ನರೇಂದ್ರ ಮೋದಿಯವರ ಆಶಯವಾಗಿದ್ದು, ಪ್ರತಿಷ್ಠಿತ ಯೋಜನೆಯಾದ ರಾಯದುರ್ಗ–ತುಮಕೂರು ಯೋಜನೆಯು ಕೂಡ ಈಗಾಗಲೇ ಭೂಸ್ವಾಧೀನ ಪ್ರಕ್ರಿಯೆ ಮುಕ್ತಾಯವಾಗಿದ್ದು, ಟೆಂಡರ್ ಕರೆಯಲಾಗಿದ್ದು, ಇನ್ನೂ ಎರಡು ಕಡೆ ಶೀಘ್ರದಲ್ಲಿ ಕೆಲಸ ಪ್ರಾರಂಭವಾಗಲಿದೆ. ಅದೇ ರೀತಿ ತುಮಕೂರು–ಚಿತ್ರದುರ್ಗ–ದಾವಣಗೆರೆ ನೇರ ರೈಲ್ವೆ ಯೋಜನೆಯ ಸಮಸ್ಯೆಯನ್ನು ಬಗೆಹರಿಸಿ, ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ, ಶೀಘ್ರವಾಗಿ ಕಾಮಗಾರಿ ಅನುಷ್ಠಾನಗೊಳಿಸಲಾಗುವುದು. ದಾವಣಗೆರೆ –ಚಿತ್ರದುರ್ಗ– ತುಮಕೂರು ನೇರ ರೈಲ್ವೆ ಯೋಜನೆ ಹಾಗೂ ತುಮಕೂರು–ರಾಯದುರ್ಗ ರೈಲ್ವೆ ಮಾರ್ಗವನ್ನು 2027 ರ ಡಿಸೆಂಬರ್ ಅಂತ್ಯಕ್ಕೆ ಪೂರ್ಣಗೊಳಿಸಿ ಏಕಕಾಲಕ್ಕೆ ಲೋಕಾರ್ಪಣೆ ಮಾಡಲಾಗುವುದು ಎಂದರು.

**ಹಿರಿಯೂರು–ಚಳ್ಳಕೆರೆ ರೈಲ್ವೆ ಮಾರ್ಗ :** ಈಗಾಗಲೆ ದಾವಣಗೆರೆ–ಚಿತ್ರದುರ್ಗ–ತುಮಕೂರು ರೈಲ್ವೆ ಮಾರ್ಗದಡಿ ಹಿರಿಯೂರು ತಾಲ್ಲೂಕಿನಲ್ಲಿ ರೈಲ್ವೆ ಮಾರ್ಗ ಸಾಗುತ್ತಿದೆ. ಈ ರೈಲ್ವೆ ಯೋಜನೆಗಳ ಜತೆಗೆ ಚಳ್ಳಕೆರೆಯಿಂದ ಹಿರಿಯೂರಿಗೆ ಹೊಸದಾಗಿ ರೈಲ್ವೆ ಸಂಪರ್ಕ ಕಲ್ಪಿಸಿ, ಹೊಸ ರೈಲ್ವೆ ಮಾರ್ಗ ಯೋಜನೆ ರೂಪಿಸಿ ಅನುಷ್ಠಾನಗೊಳಿಸಬೇಕು, ಇದರಿಂದಾಗಿ ಉತ್ತರ ಕರ್ನಾಟಕದಿಂದ ಬೆಂಗಳೂರು ಮಾರ್ಗಕ್ಕೆ ನೇರ ರೈಲ್ವೆ ಮಾರ್ಗ ಕಲ್ಪಿಸಿದಂತಾಗುತ್ತದೆ ಎಂಬುದಾಗಿ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಹಾಗೂ ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಅವರು ಬೇಡಿಕೆ ಸಲ್ಲಿಸಿದ್ದು, ಈ ಕುರಿತು ಅಧಿಕಾರಿಗಳೊಂದಿಗೆ ಚರ್ಚಿಸಿ, ಸರ್ವೆ ಮಾಡಿಸಿ, ಸೂಕ್ತ ಕ್ರಮ ವಹಿಸಲಾಗುವುದು ಎಂದು ಸಚಿವ ವಿ. ಸೋಮಣ್ಣ ಭರವಸೆ ನೀಡಿದರು.

**ಎಲ್ಲ ರೈಲ್ವೆ ಕೆಳ ಸೇತುವೆಗಳಲ್ಲಿನ ಪರಿಸ್ಥಿತಿ ಕುರಿತು ವರದಿ :** ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಹಾಗೂ ಸಂಸದ ಗೋವಿಂದ ಕಾರಜೋಳ ಅವರು ನಗರದ ತುರುವನೂರು ರಸ್ತೆ ಹಾಗೂ ಮೆದೆಹಳ್ಳಿ ರಸ್ತೆಯಲ್ಲಿನ ರೈಲ್ವೆ ಕೆಳ ಸೇತುವೆಯಲ್ಲಿ ಉಂಟಾಗಿರುವ ತೀವ್ರ ಸಮಸ್ಯೆಯ ಬಗ್ಗೆ ಫೋಟೋ ಸಹಿತ ಸಚಿವರಿಗೆ ಮಾಹಿತಿ ನೀಡಿ, ಜಿಲ್ಲೆಯಲ್ಲಿರುವ ಬಹಳಷ್ಟು ರೈಲ್ವೆ ಕೆಳ ಸೇತುವೆಗಳು ಅವೈಜ್ಞಾನಿಕವಾಗಿ ನಿರ್ಮಾಣವಾಗಿದ್ದು, ಇದರಿಂದ ಮಳೆಗಾಲದಲ್ಲಿ ತೀವ್ರ ತೊಂದರೆಯಾಗುತ್ತಿದೆ. ಹೆಚ್ಚಿನ ಪ್ರಮಾಣದಲ್ಲಿ ಮಳೆ ನೀರು ನಿಂತು ಸಾರ್ವಜನಿಕರ ಸಂಚಾರಕ್ಕೆ ಹಾಗೂ ಅಪಾಯಕ್ಕೂ ಕಾರಣವಾಗುತ್ತಿದೆ ಎಂದರು. ಇದಕ್ಕೆ ತೀವ್ರ ಬೇಸರ ವ್ಯಕ್ತಪಡಿಸಿದ ರೈಲ್ವೆ ಸಚಿವ ವಿ. ಸೋಮಣ್ಣ ಅವರು, ಕಳೆದ ಬಾರಿ ಜಿಲ್ಲೆಗೆ ಬಂದಾಗಲೇ ಈ ಕುರಿತು ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೆ, ಆದರೆ ರೈಲ್ವೆ ಇಲಾಖೆ ಅಧಿಕಾರಿಗಳ ಬೇಜವಾಬ್ದಾರಿಯಿಂದಾಗಿ, ಸಮಸ್ಯೆ ಬಗೆಹರಿದಿಲ್ಲ. ಚಿತ್ರದುರ್ಗ ನಗರದ ಸೇರಿದಂತೆ ಜಿಲ್ಲೆಯಾದ್ಯಂತ ಇರುವ ರೈಲ್ವೆ ಕೆಳ ಸೇತುವೆಗಳಲ್ಲಿ ಮಳೆ ನೀರು ಶೇಖರಣೆಯಾಗದಂತೆ ಸೂಕ್ತ ಪರಿಹಾರ ಕ್ರಮಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿರುವ ಎಲ್ಲ ರೈಲ್ವೆ ಕೆಳ ಸೇತುವೆಗಳ ಬಗ್ಗೆ ರೈಲ್ವೆ ಅಧಿಕಾರಿಗಳು ಖುದ್ದು ಭೇಟಿ ನೀಡಿ, ಅಲ್ಲಿನ ವಸ್ತು ಸ್ಥಿತಿ ಬಗ್ಗೆ ಹಾಗೂ ಸಮಸ್ಯೆಗಳಿದ್ದಲ್ಲಿ, ಅದರ ನಿವಾರಣೆಗೆ ಕೈಗೊಳ್ಳಬೇಕಾದ ಕಾರ್ಯಗಳ ಬಗ್ಗೆ ಸಮಗ್ರ ವರದಿ ಸಲ್ಲಿಸಬೇಕು. ಅಲ್ಲದೆ ಪರಿಹಾರ ಕಾರ್ಯಗಳ ಬಗ್ಗೆ ಕ್ರಿಯಾ ಯೋಜನೆ ರೂಪಿಸಿ, ಅನುಮೋದನೆಗಾಗಿ ಸಲ್ಲಿಸಬೇಕು ಎಂದು ರೈಲ್ವೆ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಹೊಸದಾಗಿ ನಿರ್ಮಾಣವಾಗುವ ರೈಲ್ವೆಮೇಲ್ಸೇತುವೆಹಾಗೂಕೆಳಸೇತುವೆಗಳಿಗೆ ಭೂಸ್ವಾಧೀನ ಆಗಬೇಕಾಗಿದೆ. ರಾಜ್ಯ ಸರ್ಕಾರಕ್ಕೆ ಭೂಸ್ವಾಧೀನ ಮಾಡುವಂತೆ ಮನವಿ ಮಾಡಲಾಗಿದೆ. ಭೂಸ್ವಾಧೀನಕ್ಕೆ ಹಾಗೂ ಸೇತುವೆಗಳ ಕಾಮಗಾರಿಗೆ ತಗಲುವ ವೆಚ್ಚವನ್ನು ಕೇಂದ್ರ ಸರ್ಕಾರವೇ ಭರಿಸಲಿದೆ ಎಂದು ಹೇಳಿದರು.

ನೇರ ರೈಲ್ವೆ ಮಾರ್ಗದಲ್ಲಿನ ಬಾಕಿ ಇರುವ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ : ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೆ ಮಾರ್ಗದಲ್ಲಿ ಈಗಾಗಲೆ ಶೇ. 90 ರಷ್ಟು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದೆ. ಆದರೆ ಇನ್ನೂ ಕೆಲವೆಡೆ ಭೂಸ್ವಾಧೀನ ಪ್ರಕ್ರಿಯೆ ನಾನಾ ಕಾರಣಗಳಿಂದಾಗಿ ಬಾಕಿ ಉಳಿದಿದೆ. ವಿಶೇಷ ಭೂಸ್ವಾಧೀನಾಧಿಕಾರಿ ವೆಂಕಟೇಶ್ ನಾಯಕ್ ಅವರು ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದ್ದು, ಈ ಪ್ರಕ್ರಿಯೆ ತ್ವರಿತಗೊಳಿಸಲು ಶ್ರಮಿಸುತ್ತಿದ್ದಾರೆ ಎಂದು ಶ್ಲಾಘಿಸಿದ ಸಚಿವ ವಿ. ಸೋಮಣ್ಣ ಅವರು, ಬಾಕಿ ಉಳಿದಿರುವ ಎಲ್ಲ ಭೂಸ್ವಾಧೀನ ಕಾರ್ಯದ ಪ್ರಕ್ರಿಯೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಿ, ರೈಲ್ವೆ ಇಲಾಖೆಗೆ ಭೂಮಿ ಹಸ್ತಾಂತರಿಸಿದಲ್ಲಿ, ಅವರು ಕಾಮಗಾರಿ ಕೈಗೊಳ್ಳಲು ಅನುಕೂಲವಾಗಲಿದೆ ಎಂದು ಸೂಚನೆ ನೀಡಿದರು. ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಮಾತನಾಡಿ, ಈ ಮಾರ್ಗದಲ್ಲಿ ಚಿತ್ರದುರ್ಗ ಹಾಗೂ ಹಿರಿಯೂರು ತಾಲ್ಲೂಕು ಸೇರಿ 1211 ಎಕರೆ ಜಮೀನಿನ ಅವಶ್ಯಕತೆ ಇದ್ದು, ಈ ಪೈಕಿ 1026 ಎಕರೆ ಜಮೀನು ಅವಾರ್ಡ್ ಆಗಿ, ಜಮೀನು ಮಾಲೀಕರಿಗೆ ಪರಿಹಾರ ವಿತರಿಸಲಾಗಿದೆ. ಭರಮಸಾಗರ–ಚಿತ್ರದುರ್ಗ ಮಾರ್ಗದವರೆಗಿನ 36 ಕಿ.ಮೀ. ವ್ಯಾಪ್ತಿಯಲ್ಲಿ 348 ಎಕರೆ ಪೈಕಿ 312 ಎಕರೆ ಈಗಾಗಲೆ ರೈಲ್ವೆ ಇಲಾಖೆಗೆ ಹಸ್ತಾಂತರಿಸಿದ್ದು, ರೈಲ್ವೆ ಕಾಮಗಾರಿ ನಡೆದಿದೆ. ಹೆಚ್ಚುವರಿಯಾಗಿ 41 ಎಕರೆ ಭೂಮಿಗೆ ರೈಲ್ವೆ ಇಲಾಖೆ ಬೇಡಿಕೆ ಸಲ್ಲಿಸಿದ್ದು, ಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಚಿತ್ರದುರ್ಗ–ಹಿರಿಯೂರು ಮಾರ್ಗದ 36 ಕಿ.ಮೀ. ವ್ಯಾಪ್ತಿಯಲ್ಲಿ ಅಗತ್ಯವಿರುವ 383 ಎಕರೆ ಪೈಕಿ 338 ಎಕರೆ ಈಗಾಗಲೆ ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ, 44 ಎಕರೆ ಹೆಚ್ಚುವರಿಯಾಗಿ ಡಿ.ಎಸ್. ಹಳ್ಳಿಯಲ್ಲಿ ಸ್ಟೇಷನ್ ನಿರ್ಮಾಣಕ್ಕೆ ರೈಲ್ವೆ ಇಲಾಖೆ ಬೇಡಿಕೆ ಸಲ್ಲಿಸಿದ್ದು, ಸ್ವಾಧೀನ ಪ್ರಕ್ರಿಯೆ ನಡೆದಿದೆ. ಹಿರಿಯೂರು–ತಾವರೆಕೆರೆ ಮಾರ್ಗದ 29 ಕಿ.ಮೀ. ವ್ಯಾಪ್ತಿಯಲ್ಲಿ 478 ಎಕರೆ ಪೈಕಿ 374 ಎಕರೆ ಜಮೀನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ಬಾಕಿ 104 ಎಕರೆ ಜಮೀನನ್ನು ಕೂಡ ರೈಲ್ವೆ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ನಡೆದಿದೆ. ರೈಲ್ವೆ ಯೋಜನೆಗಾಗಿ ಬಾಕಿ ಇರುವ ಭೂಸ್ವಾಧೀನ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ, ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗುವುದು ಎಂದರು.

**ಕಾರ್ಗೋ ಎಕನಾಮಿಕ್ ಕಾರಿಡಾರ್‌ಗೆ ಟಿ.ಬಿ. ಜಯಚಂದ್ರ ಮನವಿ :** ರಾಜ್ಯದಲ್ಲಿ ಉತ್ತಮ ನೀರಾವರಿ ವ್ಯವಸ್ಥೆ ಇದ್ದು, ಗುಣಮಟ್ಟದ ಕೃಷಿ ಬೆಳೆ ಬೆಳೆಯಲಾಗುತ್ತಿದೆ. ಆದರೆ ಸೂಕ್ತ ರೀತಿಯಲ್ಲಿ ಮಾರುಕಟ್ಟೆ ಮತ್ತು ಸಾಗಾಣಿಕೆ ವ್ಯವಸ್ಥೆ ಮಧ್ಯ ಕರ್ನಾಟಕದಲ್ಲಿ ಇಲ್ಲದ ಕಾರಣ, ಬೇರೆ ರಾಜ್ಯಗಳಿಗೆ ಹಾಗೂ ಜಾಗತಿಕ ಮಟ್ಟಕ್ಕೆ ಇಲ್ಲಿನ ಕೃಷಿ ಉತ್ಪನ್ನ ಸೇರಿದಂತೆ ಇತರೆ ಸಾಮಗ್ರಿಗಳನ್ನು ಸಕಾಲಕ್ಕೆ ಸಾಗಾಣಿಕೆ ಮಾಡಲು ಸಾಧ್ಯವಾಗುತ್ತಿಲ್ಲ. ಇದರಿಂದ ರೈತರ ಆದಾಯ ಕೂಡ ವೃದ್ಧಿಯಾಗುತ್ತಿಲ್ಲ. ಹೀಗಾಗಿ ಮಧ್ಯ ಕರ್ನಾಟಕಕ್ಕೆ ರೈಲ್ವೆ ಮಾರ್ಗದಲ್ಲಿ ಕೃಷಿ ಉತ್ಪನ್ನ ಸೇರಿದಂತೆ ವಿವಿಧ ಸಾಮಗ್ರಿಗಳ ಸಾಗಾಣಿಕೆಗೆ ವ್ಯವಸ್ಥೆ ಆಗುವುದು ಅತ್ಯಗತ್ಯವಾಗಿದೆ. ಈಗಾಗಲೆ ದಾವಣಗೆರೆ–ತುಮಕೂರು ನೇರ ರೈಲ್ವೆ ಮಾರ್ಗ ನಿರ್ಮಾಣವಾಗುತ್ತಿದ್ದು, ಈ ಮಾರ್ಗದಲ್ಲಿ ಬರುವ ಶಿರಾ ಬಳಿ ಅಥವಾ ಈ ಮಾರ್ಗದಲ್ಲಿ ರೈಲ್ವೆ ಇಲಾಖೆ ನಿರ್ಧರಿಸುವ ಯಾವುದೇ ಸ್ಥಳದಲ್ಲಿ ರೈಲ್ವೆ ಕಾರ್ಗೋ ಕಾರಿಡಾರ್ ನಿರ್ಮಾಣ ಮಾಡುವಂತೆ ಸಿರಾ ಶಾಸಕ ಹಾಗೂ ರಾಜ್ಯ ಸರ್ಕಾರದ ದೆಹಲಿ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಅವರು ರೈಲ್ವೆ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಮಾಡಿ, ಈ ಕುರಿತ ಮನವಿ ಪತ್ರವನ್ನು ಸಲ್ಲಿಸಿದರು. ಮನವಿ ಸ್ವೀಕರಿಸಿದ ಸಚಿವ ಸೋಮಣ್ಣ ಪ್ರತಿಕ್ರಿಯಿಸಿ, ಈ ಕುರಿತು ರೈಲ್ವೆ ಅಧಿಕಾರಿಗಳೊಂದಿಗೆ ಸಾಧ್ಯಾಸಾಧ್ಯತೆಗಳ ಬಗ್ಗೆ ಪರಿಶೀಲಿಸಿ, ರೈಲ್ವೆ ಕಾರ್ಗೋ ಕಾರಿಡಾರ್ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಸಂಸದ ಗೋವಿಂದ ಎಂ. ಕಾರಜೋಳ, ಶಾಸಕರಾದ ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ರೈಲ್ವೆ ಇಲಾಖೆ ಮುಖ್ಯ ಆಡಳಿತಾಧಿಕಾರಿ (ನಿರ್ಮಾಣ) ಅಜಯ್ ಶರ್ಮಾ, ವಿಭಾಗೀಯ ರೈಲ್ವೆ ವ್ಯವಸ್ಥಾಪಕ (ಡಿಜಿಎಂ) ಮುದಿತ್ ಮಿತ್ತಲ್, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ನೇರ ರೈಲ್ವೆ ಯೋಜನೆ ವಿಶೇಷ ಭೂಸ್ವಾಧೀನಾಧಿಕಾರಿ ವೆಂಕಟೇಶ್, ಸೇರಿದಂತ ರೈಲ್ವೆ ಇಲಾಖೆ ಅಧಿಕಾರಿಗಳು ಇದ್ದರು.

**ಪ್ರಮುಖ ಸುದ್ದಿ**

# ಹಿರಿಯೂರು–ಚಳ್ಳಕೆರೆ ಹೊಸ ರೈಲ್ವೆ ಮಾರ್ಗಕ್ಕೆ ಸುಧಾಕರ್ ಮನವಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನಿಂದ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೆ ಸಂಪರ್ಕ ಕಲ್ಪಿಸಲು ಹೊಸ ರೈಲ್ವೇ ಮಾರ್ಗ ಯೋಜನೆ ರೂಪಿಸಿ ಅನುಷ್ಠಾನಗೊಳಿಸಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಮನವಿ ಮಾಡಿದರು.



ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಕೇಂದ್ರ ರೈಲ್ವೆ ಖಾತೆ ಹಾಗೂ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರ ಅಧ್ಯಕ್ಷತೆಯಲ್ಲಿ ಜರುಗಿದ ದಾವಣಗೆರೆ–ಚಿತ್ರದುರ್ಗ–ತುಮಕೂರು ನೂತನ ರೈಲ್ವೆ ಮಾರ್ಗದ ಕಾಮಗಾರಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅವರು ಈ ಮನವಿ ಸಲ್ಲಿಸಿದರು.

ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸದಾಗಿ ದಾವಣಗೆರೆ – ಚಿತ್ರದುರ್ಗ–ತುಮಕೂರು ನೇರ ರೈಲ್ವೇ ಯೋಜನೆಯ ಕಾಮಗಾರಿಯು ಪ್ರಾರಂಭವಾಗಿರುವುದು ಜಿಲ್ಲೆಯ ಜನತೆಗೆ ಸಂತೋಷದ ವಿಷಯವಾಗಿರುತ್ತದೆ. ಈ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿಗೆ ರೈಲ್ವೇ ಸಂಪರ್ಕ ಕಲ್ಪಿಸಲಾಗುತ್ತಿದ್ದು, ಅದೇ ರೀತಿ ಚಿತ್ರದುರ್ಗ ಜಿಲ್ಲೆಯ, ಹೊಳಲ್ಕೆರೆ, ಹೊಸದುರ್ಗ ಮತ್ತು ಚಳ್ಳಕೆರೆ ತಾಲ್ಲೂಕಿಗೆ ಈಗಾಗಲೇ ವಿವಿಧ ರೀತಿಯಲ್ಲಿ ರೈಲ್ವೇ ಸಂಪರ್ಕ ಕಲ್ಪಿಸಲಾಗಿದ್ದು, ಹಿರಿಯೂರು ತಾಲ್ಲೂಕಿನಿಂದ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿಗೆ ಇದುವರೆವಿಗೂ ಯಾವುದೇರೈಲ್ವೆಸಂಪರ್ಕ ಕಲ್ಪಿಸಿರುವುದಿಲ್ಲ. ಇದರಿಂದ ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕಿನ ಮಧ್ಯ ಭಾಗದ ಸಾರ್ವಜನಿಕರ, ರೈತರ ಉತ್ಪನ್ನಗಳಿಗೆ ಹಾಗೂ ಇತರ ಕೃಷಿಯೇತರ ಉತ್ಪನ್ನಗಳಿಗೆ ಸಾಗಣೆ ಮಾಡಲು ತೊಂದರೆಯಾಗುತ್ತಿದ್ದು ಅಲ್ಲದೇ ಸಾರ್ವಜನಿರು ಸಹ ರೈಲ್ವೆ ಸೇವೆಯಿಂದ ವಂಚಿತರಾಗಿದ್ದು, ಅವರು ಬೆಂಗಳೂರಿಗೆ ಮತ್ತು ಉತ್ತರ ಭಾರತದ ನಗರಗಳಿಗೆ ಸಂಪರ್ಕ ಕೈಗೊಳ್ಳಬೇಕಾದಲ್ಲಿ ಚಳ್ಳಕೆರೆಯಿಂದ ಬಸ್ ಮೂಲಕ ಬೆಂಗಳೂರಿಗೆ ತೆರಳಿ ಅಲ್ಲಿಂದ ಉತ್ತರ ಭಾರತದ ನಗರಗಳಿಗೆ ರೈಲು ಮೂಲಕ ತೆರಳುತ್ತಿದ್ದು ಇದರಿಂದ ಅಧಿಕ ಆರ್ಥಿಕ ವೆಚ್ಚವಾಗುತ್ತಿದೆ. ಹೀಗಾಗಿ ಚಳ್ಳಕೆರೆ ಹಾಗೂ ಹಿರಿಯೂರು ಮಧ್ಯ ಭಾಗದ ಸಾರ್ವಜನಿಕರಿಗೆ ಹಾಗೂ ರೈತರಿಗೆ ಮತ್ತು ಮಕ್ಕಳ ಉನ್ನತ ವಿಧ್ಯಾಭ್ಯಾಸಕ್ಕೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಹಿರಿಯೂರು ತಾಲ್ಲೂಕಿನಿಂದ ಚಿತ್ರುದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೇ ಸಂಪರ್ಕ ಕಲ್ಪಿಸಲು ಹೊಸ ರೈಲ್ವೇ ಮಾರ್ಗ ಯೋಜನೆ ರೂಪಿಸುವುದು ಅತ್ಯವ್ಯಶಕವಾಗಿದೆ. ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನಿಂದ ಚಳ್ಳಕೆರೆ ತಾಲ್ಲೂಕಿಗೆ ಹೊಸದಾಗಿ ರೈಲ್ವೇ ಸಂಪರ್ಕ ಕಲ್ಪಿಸಲು ಹೊಸ ರೈಲ್ವೆ ಮಾರ್ಗ ಯೋಜನೆ ರೂಪಿಸಿ ತುರ್ತಾಗಿ ಅನುಷ್ಠಾನಗೊಳಿಸುವ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸಚಿವ ಡಿ. ಸುಧಾಕರ್ ಅವರು ಮನವಿ ಮಾಡಿದರು. ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಅವರು ಕೂಡ ಇದೇ ವಿಷಯದ ಬಗ್ಗೆ ಕೇಂದ್ರ ರೈಲ್ವೆ ಸಚಿವ ವಿ. ಸೋಮಣ್ಣ ಅವರಿಗೆ ಮನವಿ ಮಾಡಿ, ಹಿರಿಯೂರು–ಚಳ್ಳಕೆರೆ ನೂತನ ರೈಲ್ವೆ ಮಾರ್ಗ ಕೈಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದರು. ಮನವಿ ಸ್ವೀಕರಿಸಿದ ಸಚಿವ ಸೋಮಣ್ಣ ಪ್ರತಿಕ್ರಿಯಿಸಿ, ಈ ಕುರಿತು ರೈಲ್ವೆ ಅಧಿಕಾರಿಗಳೊಂದಿಗೆ ಸಾಧ್ಯಾಸಾಧ್ಯತೆಗಳ ಬಗ್ಗೆ ಪರಿಶೀಲಿಸಿ, ರೈಲ್ವೆ ಕಾರ್ಗೋ ಕಾರಿಡಾರ್ ನಿರ್ಮಾಣಕ್ಕೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

## ಫಾಸ್ಟ್ ನ್ಯೂಸ್

### ವೃದ್ಧ ಕಾಣೆ

» ದಾವಣಗೆರೆ

ದೊಡ್ಡಬಾತಿ ಗ್ರಾಮದ ನಿವಾಸಿ ಜುಂಜಪ್ಪರ ಬಸಪ್ಪ ಬಿನ್ ಲೇ.ಗಿಡ್ಡಪ್ಪ (ಸು.80 ವರ್ಷ) ವ್ಯಕ್ತಿ ಕಾಣೆಯಾದ ಕುರಿತು 2025ರ ಮೇ 10 ರಂದು ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಜುಂಜಪ್ಪರ ಬಸಪ್ಪ, ಸು.5 ಅಡಿ ಎತ್ತರ, ಕಪ್ಪು ಬಣ್ಣ, ತೆಳ್ಳನೆಯ ಮೈಕಟ್ಟು, ಬಲಗೈಯಲ್ಲಿ ಕೊಂಡಿ ಇರುವ ಬೆಳ್ಳಿ ಕಡಗ ಇರುತ್ತದೆ. ಬಿಳಿ ಗಡ್ಡ ಬಿಟ್ಟಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡುಬಂದಲ್ಲಿ ಗ್ರಾಮಾಂತರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08192–253100, ಕಂಟ್ರೋಲ್ ರೂಂ 08192–262555, ಗ್ರಾಮಾಂತರ ಉಪವಿಭಾಗದ ಉಪಾಧೀಕ್ಷಕರ ಕಚೇರಿಯ 08192–262550 ದೂರವಾಣಿಗೆ ಸಂಪಕಿಸಬಹುದು ಎಂದು ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ: ಪತ್ತೆಗೆ ಮನವಿ

» ದಾವಣಗೆರೆ

ನಗರದ ವಿದ್ಯಾನಗದ ವಾಸಿ ರಾಕೇಶ್ ತಂದೆ ಕೆಂಚಪ್ಪ ವಯಸ್ಸು 16, ವ್ಯಕ್ತಿ ಕಾಣೆಯಾದ ಕುರಿತು 2025ರ ಮೇ 4 ರಂದು ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ವ್ಯಕ್ತಿಯ ಚಹರೆ: ಸು.161 ಅಡಿ ಎತ್ತರ, ತೆಳ್ಳನೆಯ ಮೈಕಟ್ಟು, ಗೋಧಿ ಮೈಬಣ್ಣ, ಹೊಂದಿದ್ದು, ಹೆಚ್ಚಾಗಿ ಕನ್ನಡ ಮಾತನಾಡುತ್ತಾನೆ. ಆರೇಂಜ್ ಕಲರ್ ಶರ್ಟ್, ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ. ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡುಬಂದಲ್ಲಿ ವಿದ್ಯಾನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08192–262688, 9480803251 ಸಂಪರ್ಕಿಸಲು ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» ದಾವಣಗೆರೆ

ಹಾಲುವರ್ತಿ ಗ್ರಾಮದ ನಿವಾಸಿ ಮಲ್ಲೇಶ ಹೆಚ್.ಜಿ ಬಿನ್ ಗುರುಶಾಂತಪ್ಪ (ಸು.32 ವರ್ಷ) ವ್ಯಕ್ತಿ ಕಾಣೆಯಾದ ಕುರಿತು 2024ರ ನವಂಬರ್ 15 ರಂದು ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಾಣೆಯಾದ ಜುಂಜಪ್ಪರ ಬಸಪ್ಪ, ಸು.5.5 ಅಡಿ ಎತ್ತರ, ಎಣ್ಣೆ ಗೆಂಪು ಮೈಬಣ್ಣ, ಕೋಲುಮುಖ, ಸಾಧಾರಣ ಮೈಕಟ್ಟು, ಈ ಮೇಲ್ಕಂಡ ವ್ಯಕ್ತಿಯ ಕುರಿತು ಮಾಹಿತಿ ಕಂಡುಬಂದಲ್ಲಿ ಗ್ರಾಮಾಂತರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08192–253100, ಕಂಟ್ರೋಲ್ ರೂಂ 08192–262555, ಗ್ರಾಮಾಂತರ ಉಪವಿಭಾಗದ ಉಪಾಧೀಕ್ಷಕರ ಕಚೇರಿಯ 08192–262550 ದೂರವಾಣಿಗೆ ಸಂಪಕಿಸಬಹುದು ಎಂದು ಗ್ರಾಮಾಂತರ ಪೊಲೀಸ್ ಠಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವ ಪರಿಸರ ದಿನಾಚರಣೆ-2025 ಕಾರ್ಯಕ್ರಮ ಶಾಲೆಗಳಲ್ಲಿ ಆಚರಿಸುವ ಸೂಚನೆ

» ದಾವಣಗೆರೆ

ವಿಶ್ವ ಪರಿಸರ ದಿನಾಚರಣೆ–2025 ರಂದು ಜಿಲ್ಲೆಯ ಎಲ್ಲಾ ಶಾಲೆಗಳಲ್ಲಿ ಆಚರಿಸುವ ಮೂಲಕ ಪರಿಸರ ದಿನಾಚರಣೆಯನ್ನು ಆಚರಿಸಲಾಗುವುದು. ಜೂನ್ 2 ರಂದು ಪ್ರಬಂಧ ಸ್ಪರ್ಧೆ ವಿಷಯ: ಪ್ಲಾಸ್ಟಿಕ್ ಮಾಲಿನ್ಯ ಕೊನೆಗೊಳಿಸುವ ವಿಧಾನಗಳು, 2. ಈ ವರ್ಷ ಪರಿಸರ ಸಂರಕ್ಷಣೆಗೆ ನನ್ನ ಕೊಡುಗೆ, ಹಸಿರು ಮನೆ ಪರಿಣಾಮ ಮತ್ತು ನಿಯಂತ್ರಣ ಕ್ರಮಗಳು, (ಇದರಲ್ಲಿ ಯಾವುದಾದರು ಒಂದು ವಿಷಯದ ಬಗ್ಗೆ ಪ್ರಬಂಧ ಬರೆಯುವುದು .ಹಾಗೂ ಶಾಲೆಗಳು ಮುಖ್ಯ ಶಿಕ್ಷಕರು ಪ್ರಬಂಧದ ಬಗ್ಗೆ ಮೊದಲೇ ಮಾಹಿತಿ ಹಾಗೂ ಸಮಯಾವಕಾಶ ನೀಡಿ ನಂತರ ಸ್ಪರ್ಧೆಯನ್ನು ನಡೆಸುವುದು) ಜೂನ್ 3 ರಂದು ಚಿತ್ರಕಲಾ ಸ್ಪರ್ಧೆ ವಿಷಯ: ಜೀವ ಸಂಕುಲದ ಉಳಿವಿಗೆ ಪರಿಸರ ಸಂರಕ್ಷಣೆ, ಹಾಗೂ ಚರ್ಚಾ ಸ್ಪರ್ಧೆವಿಷಯ: ಜಾಗತಿಕ ತಾಪಮಾನ ಮತ್ತು ಭೂಮಂಡಲದ ಸಂರಕ್ಷಣೆ,ಅರಣ್ಯ ಇಲಾಖೆಯ ಸಹಯೋಗದೊಂದಿಗೆ ಪ್ರತಿ ಶಾಲೆಯಲ್ಲಿ ಕನಿಷ್ಠ 20 ಸಸಿಗಳನ್ನು ನೆಡುವುದು, ಹಾಗೂ ಪ್ರತಿ ಗಿಡದ ಮುಂದೆ ವಿದ್ಯಾರ್ಥಿಯ ಹೆಸರಿನ ನಾಮಫಲಕ ನೆಡುವುದು. ಜೂನ್ 5 ರಂದು ಪ್ರತಿಯೊಬ್ಬ ವಿದ್ಯಾರ್ಥಿಯು ತಮ್ಮ ಮನೆಯಲ್ಲಿರುವ ಪ್ಲಾಸ್ಟಿಕ್ ಬಾಟಲ್ ಗಳನ್ನು ತೆಗೆದುಕೊಂಡು ಬಂದು ಶಾಲೆಯಲ್ಲಿರುವ ವೇಸ್ಟ್ ಬಾಟಲ್ ಗಳನ್ನು ಸಂಗ್ರಹ ಮಾಡುವ ಡ್ರಮ್ ನಲ್ಲಿ ಹಾಕುವುದು ತದನಂತರ ಶಾಲೆಯವರು ಸಂಜೆ 05ಗಂಟೆಗೆ ತಮ್ಮ ಶಾಲೆಯಿಂದ ಒಟ್ಟಾರೆ ಸಂಗ್ರಹಿಸಿದ ಬಾಟಲ್ ಗಳನ್ನು ತೂಕ ಮಾಡಿ ಬ್ಲಾಕ್ ಹಂತದವರೆಗೆ ಮಾಹಿತಿ ನೀಡುವುದು. ಈ ಮಾಹಿತಿಯನ್ನು ಬಿ.ಆರ್.ಸಿ ರವರು ಜಿಲ್ಲಾ ಹಂತಕ್ಕೆ ನೀಡುವುದು.ಮನೆ ಹಾಗೂ ಶಾಲೆಯಲ್ಲಿ ಪರಿಸರ ಜಾಗೃತಿ ಕುರಿತು ಅನುಸರಿಸಬಹುದಾದ ಅಂಶಗಳ ಕುರಿತು ವಿದ್ಯಾರ್ಥಿಗಳಿಗೆ ಟಿಪ್ಪಣಿ, ನೀರು ಪೋಲಾಗುವುದನ್ನು ತಪ್ಪಿಸುವುದು. ಹಸಿ ತರಕಾರಿ ಹಾಕುವ ಗೊಬ್ಬರಗುಂಡಿ, ಸಾರ್ವಜನಿಕ ವಾಹನಗಳನ್ನು ಬಳಸುವುದು, ಬೈಸಿಕಲ್ ಬಳಕೆ, ಇ–ತ್ಯಾಜ್ಯ ಕುರಿತು ಅರಿವು ಮೂಡಿಸುವುದು, ಕಾಲಾಡ್ನಿಗೆ ಮಹತ್ವ ತಿಳಿಸುವುದು, ಅರಣ್ಯ ಇಲಾಖೆ ಸಹಯೋಗದೊಂದಿಗೆ ಲಭ್ಯವಿರುವ ಸ್ಥಳಗಳಲ್ಲಿ ಮಣ್ಣಿನ ಬೀಜದ ಉಂಡೆಗಳನ್ನು ಹಾಕುವುದು, ಅನಾವಶ್ಯಕ ಪೇಪರ್ ಬಳಕೆಯನ್ನು ಕಡಿಮೆ ಮಾಡುವುದು, ಪ್ರತಿ ವಿದ್ಯಾರ್ಥಿಯ ಮನೆ ಮುಂದೆ ಸಸಿ ನಡುವಂತೆ ಜಾಗೃತಿ ಮೂಡಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕೊಟ್ರೇಶ್.ಜಿ ತಿಳಿಸಿದ್ದಾರೆ.

# ಪ್ರತಿ ಪ್ರಜೆಯೂ ಸೈನಿಕರಾಗಿ ಹೊರ ಹೊಮ್ಮಬೇಕು

» ಚಿತ್ರದುರ್ಗ





ಆಪರೇಷನ್ ಸಿಂಧೂರದಿಂದ ನಮ್ಮ ಸೇನೆಯ ಗೌರವ ಜಾಸ್ತಿಯಾಗಿದೆ. ಪ್ರತಿ ಪ್ರಜೆಯೂ ಸೈನಿಕರಾಗಿ ಹೊರ ಹೊಮ್ಮಬೇಕೆಂದು ನಿವೃತ್ತ ಯೋಧ ಹವಾಲ್ದಾರ್ ಸೂರಯ್ಯ ಕರೆ ನೀಡಿದರು.

ನಾಗರೀಕರ ವೇದಿಕೆವತಿಯಿಂದ ಶನಿವಾರ ನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ಆಪರೇಷನ್ ಸಿಂಧೂರ ಬೃಹತ್ ತಿರಂಗಾಯಡಿಯಲ್ಲಿ ಒನಕೆ ಓಬವ್ವ ವೃತ್ತದಲ್ಲಿ ಯಾತ್ರೆಯನ್ನುದ್ದೇಶಿಸಿ ಮಾತನಾಡಿ 1965, 1971, 1999, 2001, 2016 ರಲ್ಲಿಯೂ ಪಾಕಿಸ್ತಾನ ಭಾರತದ ಮೇಲೆ ದಾಳಿ ಮಾಡಿದಾಗ ನಮ್ಮ ಯೋಧರು ತಕ್ಕ ಉತ್ತರ ನೀಡಿದ್ದಾರೆ. ಪಾಕಿಸ್ತಾನಕ್ಕೆ ನುಗ್ಗಿ ಶತ್ರುಗಳನ್ನು ಸಂಹಾರ ಮಾಡಿದ ದೇಶ ನಮ್ಮದು. 2021 ರಲ್ಲಿ ಪುಲ್ವಾಮ ದಾಳಿ ನಡೆದಾಗಲು ಉಗ್ರರ ನೆಲೆಗಳನ್ನು ಸೈನಿಕರು ಧ್ವಂಸ ಮಾಡಿದ್ದರು. ಆಪರೇಷನ್ ಸಿಂಧೂರದಿಂದ ನಮ್ಮ ಸೇನೆಯ ಗೌರವ ಜಾಸ್ತಿಯಾಗಿದೆ. ಪ್ರತಿ ಪ್ರಜೆಯೂ ಸೈನಿಕರಾಗಿ ಹೊರ ಹೊಮ್ಮಬೇಕೆಂದು ಕರೆ ನೀಡಿದರು.

ರಾಷ್ಟ್ರೀಯ ಸ್ವಯಂ ಸೇವಕ ಪ್ರಮುಖರಾದವ ಕೃಷ್ಣ ಮಾತನಾಡಿ ಒಂದು ಕಿ.ಮೀ.ಉದ್ದದ ತಿರಂಗಾ ಧ್ವಜ ಯಾತ್ರೆ ನಡೆಸಿ ನಮ್ಮ ಯೋಧರಿಗೆ ಕೃತಜ್ಞತೆ ಸಮರ್ಪಿಸಿರುವುದು ನಿಜಕ್ಕೂ ದೇಶಭಕ್ತಿಯನ್ನು ಮೆರೆದಂತೆ. ನಮ್ಮ ದೇಶ ಪಾಕಿಸ್ತಾನವನ್ನು ಬಗ್ಗು ಬಡಿಯುವಲ್ಲಿ ನಿರ್ಣಾಯಕ ಹಂತಕ್ಕೆ ಬಂದು ನಿಂತಿದೆ. ನಮ್ಮ ಯೋಧರು ಪ್ರಪಂಚಕ್ಕೆ ಮಾದರಿ. ಆಪರೇಷನ್ ಸಿಂಧೂರದಂತ ಯುದ್ದವನ್ನು ಪ್ರಪಂಚದಲ್ಲಿಯೇ ಯಾರು ಮಾಡಿಲ್ಲ. ಭಾರತವನ್ನು ದ್ವೇಷಿಸುವುದೇ ಪಾಕಿಸ್ತಾನದ ಬಳಿಯಿರುವ ಅಸ್ತ್ರ ಎಂದು ಹೇಳಿದರು.

ಜ್ಯೋತಿ ಲಕ್ಷ್ಮಣ್ ಮಾತನಾಡುತ್ತ ಕಮಾಂಡರ್ಗಳಾದ ಸೋಫಿಯಾ ಖುರೇಷಿ, ವ್ಯೂಮಿಕ ಸಿಂಗ್ ಇವರುಗಳು ಆಪರೇಷನ್ ಸಿಂಧೂರದ ಮುಂದಾಳತ್ವ ವಹಿಸಿ ಪಾಕಿಸ್ತಾನದ ಭಯೋತ್ಪಾದಕರನ್ನು ಬಗ್ಗು ಬಡಿದಿದ್ದಾರೆ. ಅಹಲ್ಯಾಬಾಯಿ ಹೋಳ್ಕರ್, ಕೆಳದಿ ಚನ್ನಮ್ಮ, ರಾಣಿ ಅಬ್ಬಕ್ಕ, ಒನಕೆ ಓಬವ್ವ ಇವರುಗಳ ದಿಟ್ಟತನ ಇಂದಿನ ಮಹಿಳೆಯರಲ್ಲಿರಬೇಕು. ಮಹಿಳೆಗೆ ಸಿಂಧೂರ ಪವಿತ್ರತೆ ಏನೆಂಬುದು ಇಡಿ ದೇಶಕ್ಕೆ ಗೊತ್ತಾಗಿದೆ. ಅದಕ್ಕಾಗಿ 26 ಮಂದಿಯನ್ನು ಬಲಿ ತೆಗೆದುಕೊಂಡ ಭಯೋತ್ಪಾದಕರಿಗೆ ನಮ್ಮ ಯೋಧರು ಆಪರೇಷನ್ ಸಿಂಧೂರ ಮೂಲಕ ಉತ್ತರ ನೀಡಿದ್ದಾರೆಂದು ಹರ್ಷ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಬಂಜಾರ ಗುರುಪೀಠದ ಸರ್ದಾರ್ ಸೇವಾಲಾಲ್ ಸ್ವಾಮೀಜಿ ಮಾತನಾಡಿ, ಭಾರತ ಜಗತ್ತಿಗೆ ತಾಯಿ ಬೇರಿದ್ದಂತೆ. ಬೇರೆಯವರ ಮೇಲೆ ಎಂದಿಗೂ ದಬ್ಬಾಳಿಕೆ ಮಾಡಲ್ಲ. ಶರಣರು, ಸಂತರು, ಮಹಾತ್ಮರು, ವೀರಪುರುಷರು ನೆಲೆಸಿರುವ ದೇಶ ನಮ್ಮದು ಎಂದು ವಿಶ್ವಕ್ಕೆ ಗೊತ್ತು. ಶಿವಾಜಿಮಹಾರಾಜರು, ರಾಣಾ ಪ್ರತಾಪ್ಸಿಂಗ್, ಪೃಥ್ವಿರಾಜ್ ಚವ್ಹಾಣ್, ಬುದ್ದ, ಬಸವ ಹುಟ್ಟಿರುವ ನೆಲದಲ್ಲಿ ಭಯೋತ್ಪಾದನೆಗೆ ಅವಕಾಶವಿಲ್ಲ. ದೇಶದ್ರೋಹಿ, ಧರ್ಮದ್ರೋಹಿಗಳಿಗೆ ತಕ್ಕ ಶಿಕ್ಷೆಯಾಗುತ್ತದೆ. ಭಾರತವನ್ನು ಕೆಣಕಿ ಪಾಪಿ ಪಾಕಿಸ್ತಾನದವರು ತಿಣುಕುತ್ತಿದ್ದಾರೆ. ಭಾರತೀಯರೆಂದರೆ ತಾಯಿ ಹೃದಯದವರು. ಭಾರತವನ್ನು ಯಾರೆ ಮುಟ್ಟಿದರು ಸರ್ವನಾಶವಾಗುತ್ತಾರೆಂದು ಹೇಳಿದರು.

ಗಡಿಯಲ್ಲಿ ಯೋಧರು ಕಾಯುತ್ತಿರುವುದರಿಂದ ನಾವು ನೀವುಗಳೆಲ್ಲಾ ಕ್ಷೇಮವಾಗಿದ್ದೇವೆ. ನಮ್ಮ ದೇಶದ ಸ್ವಾಭಿಮಾನಕ್ಕೆ ಧಕ್ಕೆ ಬಂದರೆ ಸುಮ್ಮನಿರಲ್ಲ ಪ್ರತಿಯೊಬ್ಬರಿಗೂ ರಕ್ತ ಕುದಿಯುತ್ತದೆ. ಅವಕಾಶ ನೀಡಿದರೆ ನಾನು ಕೂಡ ಗನ್ ಹಿಡಿದು ಗಡಿಯಲ್ಲಿ ದೇಶ ಕಾಯುತ್ತೇನೆಂದು ಹೇಳಿದ ಸ್ವಾಮೀಜಿ ಭಯೋತ್ಪಾದನೆ ಸಂಪೂರ್ಣವಾಗಿ ನಿಲ್ಲಬೇಕು ಭಯೋತ್ಪಾದನೆಯನ್ನು ಸಂಹಾರ ಮಾಡಬೇಕಾಗಿರುವುದರಿಂದ ಪ್ರತಿ ಮನೆಯಿಂದಲೂ ಒಬ್ಬನನ್ನು ಸೈನ್ಯಕ್ಕೆ ಕಡ್ಡಾಯವಾಗಿ ಸೇರಿಸುವಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಆದೇಶ ಹೊರಡಿಸಬೇಕೆಂದು ಸ್ವಾಮೀಜಿ ಒತ್ತಾಯಿಸಿದರು.



ಈ ಸಂದರ್ಭದಲ್ಲಿ ಶೋಭಾಯಾತ್ರೆಯು ಹೊಳಲ್ಕೆರೆ ರಸ್ತೆಯ ಕ್ರಾಂತಿವೀರ ಸಂಗೊಳ್ಳಿರಾಯಣ್ಣ ವೃತ್ತದಿಂದ ಪ್ರಾರಂಭವಾಗಿ, ಸಂಪಿಗೆ ಸಿದ್ದೇಶ್ವರ ಶಾಲೆಯ ಮೂಲಕ ಸಂತೇಪೇಟೆ,ಬಿ.ಡಿ.ರಸ್ತೆ, ಎಸ್,ಬಿಎಂ. ವೃತ್ತ, ಮಹಾವೀರ ವೃತ್ತ, ತಾಲ್ಲೂಕು ಕಚೇರಿ ಮುಂಭಾಗ ವಾಸವಿ ವೃತ್ತದ ಮೂಲಕ ಡಿ.ಸಿ. ಸರ್ಕಲ್‌ನ ಒನಕೆ ಓಬವ್ವ ವೃತ್ತದಲ್ಲಿ ಸಮಾಪ್ತಿಯಾಯಿತು.

ತಿರಂಗ ಯಾತ್ರೆಯಲ್ಲಿ 1 ಕಿ.ಮೀ, ಉದ್ದದ ತ್ರಿವರ್ಣ ಧ್ವಜವನ್ನು ಪ್ರದರ್ಶನ ಮಾಡಲಾಯಿತು. ಇದ್ದಲ್ಲದೆ ಇಸ್ರೇಲ್ ಯುದ್ಧ ವಿಮಾನಗಳ ಮಾದರಿ, ದೇಶ ಭಕ್ತರ ವೇಷಭೂಷಣಗಳನ್ನು ತೊಟ್ಟ ಮಕ್ಕಳು ಭಾಗವಹಿಸಿದ್ದರು. ನಗರದ ವಿವಿಧ ಸಂಘಟನೆ, ಸಂಘದ ಪದಾಧಿಕಾರಿಗಳು, ರೈತರು, ಕಾರ್ಮಿಕರು, ಮಠಾಧೀಶರು, ನ್ಯಾಯಾವಾದಿಗಳು, ವೈದ್ಯರ ಸಂಘ ನಿವೃತ್ತ ಸೈನಿಕರ ಸಂಘ, ಕಾಲೇಜಿನ ವಿದ್ಯಾರ್ಥಿಗಳು, ಸ್ವಸಹಾಯ ಸಂಘ ಹಾಗೂ ನಿವೃತ್ತ ನೌಕರರ ಸಂಘದ ಪದಾಧಿಕಾರಿಗಳು, ಯೋಗ ಸಮಿತಿಯವರು, ಯುವಜನಾಂಗ, ಕ್ರೀಡಾಪಟುಗಳು ಸೇರಿದಂತೆ ಸುಮಾರು 5000ಕ್ಕೂ ಹೆಚ್ಚು ಜನತೆ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಕಬೀರಾನಂದಾಶ್ರಮದ ಶಿವಲಿಂಗಾನಂದ ಸ್ವಾಮಿ, ಸಂಸದ ಗೋವಿಂದ ಕಾರಜೋಳ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ಮಾಜಿ ಶಾಸಕರುಗಳಾದ ಜಿ.ಹೆಚ್.ತಿಪ್ಪಾರೆಡ್ಡಿ, ಎಸ್.ಕೆ.ಬಸವರಾಜನ್, ವಿಧಾನಪರಿಷತ್ ಸದಸ್ಯ ಕೆ.ಎಸ್.ನವೀನ್,ಎನ್.ಆರ್.ಲಕ್ಷ್ಮಿ ಕಾಂತ್, ಮಧುಗಿರಿಜಿಲ್ಲೆ ಬಿಜೆಪಿ. ಅಧ್ಯಕ್ಷ ಹನುಮಂತೆಗೌಡ, ಬಿಜೆಪಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಜಿ.ಟಿ.ಸುರೇಶ ಸಿದ್ದಾಪುರ, ಸಂಪತ್, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರುಗಳಾದ ತಿಪ್ಪೇಸ್ವಾಮಿ, ಬದ್ರಿನಾಥ್, ವಾಸವಿ ವಿದ್ಯಾಸಂಸ್ಥೆ ಅಧ್ಯಕ್ಷರಾದ ಸತ್ಯನಾರಾಯಣಶೆಟ್ಟಿ, ಬಿಜೆಪಿ.ವಕ್ತಾರ ನಾಗರಾಜ್ ಬೇದ್ರೆ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ನಗರಸಭೆ ಸದಸ್ಯರುಗಳಾದ ಶ್ರೀನಿವಾಸ್, ಹರೀಶ್, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ಶೈಲಜಾರೆಡ್ಡಿ, ನವೀನ್ ಚಾಲುಕ್ಯ, ಕೋಟೆ ವಾಯುವಿಹಾರಿಗಳ ಸಂಘದ ಅಧ್ಯಕ್ಷ ಆರ್.ಸತ್ಯಣ್ಣ ಸೇರಿದಂತೆ ವಿವಿಧ ಶಾಲಾ–ಕಾಲೇಜುಗಳ ನೂರಾರು ವಿದ್ಯಾರ್ಥಿ–ವಿದ್ಯಾರ್ಥಿನಿಯರು ತಿರಂಗಾ ಯಾತ್ರೆಯಲ್ಲಿ ಪಾಲ್ಗೊಂಡಿದ್ದರು.

ಮೊಳಕಾಲ್ಮೂರಿನ ಹರೀಶ್ ಮತ್ತು ತಂಡದವರು ಎಂಟು ಅಡಿ ಅಗಲ, ಒಂದು ಕಿ.ಮೀ.ಉದ್ದದ ತಿರಂಗಾ ಧ್ವಜವನ್ನು ಸಿದ್ದಪಡಿಸಿದ್ದರು. ನಾಗರಾಜ್ ಬೇದ್ರೆ ಮತ್ತು ತಂಡದವರು ತ್ರಿವರ್ಣ ಧ್ವಜದ ಚಿತ್ರವನ್ನು ವಿದ್ಯಾರ್ಥಿಗಳ ಕೈ ಹಾಗೂ ಕೆನ್ನೆಯಲ್ಲಿ ಚಿತ್ರಿಸಿ ದೇಶಭಕ್ತಿ ಮೂಡಿಸಿದರು.

# ಚಿತ್ರದುರ್ಗ–ದಾವಣಗೆರೆ ರಸ್ತೆಯ ರೈಲ್ವೆ ಗೇಟ್‌ಗೆ ಒಂದು ವಾರದೊಳಗೆ ಟೆಂಡರ್: ಸಚಿವ ಸೋಮಣ್ಣ

» ಚಿತ್ರದುರ್ಗ



ಚಿತ್ರದುರ್ಗ ನಗರದಿಂದ ದಾವಣಗೆರೆಗೆ ತೆರಳುವ ರಸ್ತೆ ಮಾರ್ಗ ಅಂದರೆ ಚಿತ್ರದುರ್ಗದ ರೈಲ್ವೆ ಸ್ಟೇಷನ್ ಹತ್ತಿರದ ರೈಲ್ವೆ ಗೇಟ್‌ಗೆ ರೈಲ್ವೆ ಮೇಲ್ಸೇತುವೆ ನಿರ್ಮಾಣ ಕಾಮಗಾರಿಗೆ ಒಂದು ವಾರದ ಒಳಗಾಗಿ ಟೆಂಡರ್ ಕರೆಯಬೇಕು ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅಧಿಕಾರಿಗಳಿಗೆ ತಾಕೀತು ಮಾಡಿದರು.

ನಗರದ ರೈಲ್ವೆ ನಿಲ್ದಾಣ ಬಳಿ ಇರುವ ಚಿತ್ರದುರ್ಗ–ದಾವಣಗೆರೆ ಮಾರ್ಗದ ರಸ್ತೆಗೆ ಅಡ್ಡಲಾಗಿರುವ ರೈಲ್ವೆಗೇಟ್ ಸ್ಥಳಕ್ಕೆ ಶನಿವಾರದಂದು ಭೇಟಿ ನೀಡಿದ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರಿಗೆ ಈ ರೈಲ್ವೆ ಗೇಟ್ ಸಂಖ್ಯೆ 22 ರಿಂದ ಸಾರ್ವಜನಿಕರಿಗೆ, ವಾಹನ ಸಂಚಾರಕ್ಕೆ ಉಂಟಾಗುತ್ತಿರುವ ತೀವ್ರ ತೊಂದರೆಗಳ ಬಗ್ಗೆ ಸಂಸದ ಗೋವಿಂದ ಕಾರಜೋಳ ಅವರು ಮನವರಿಕೆ ಮಾಡಿಕೊಟ್ಟರು. ದಿನಕ್ಕೆ ಕನಿಷ್ಠ 30 ಬಾರಿ ರೈಲ್ವೆ ಗೇಟ್ ಬಂದ್ ಮಾಡುವುದರಿಂದ, ಹಲವು ಬಾರಿ ಆ್ಯಂಬುಲೆನ್ಸ್‌ಗಳು, ಪ್ರಯಾಣಿಕರ ಬಸ್‌ಗಳು, ವಾಹನ ಸವಾರರು ಅಸಹನೀಯ ತೊಂದರೆ ಅನುಭವಿಸುತ್ತಿದ್ದಾರೆ. ಆದರೆ ಸಂಬಂಧಪಟ್ಟ ಅಧಿಕಾರಿಗಳು ಈ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಸ್ಥಳದಲ್ಲಿ ಉಪಸ್ಥಿತರಿದ್ದ ರೈಲ್ವೆಯ ಉಪ ಮುಖ್ಯ ಇಂಜಿನಿಯರ್ ನಿಂಗಪ್ಪ ಅವರನ್ನು ರೈಲ್ವೆ ಸಚಿವ ವಿ. ಸೋಮಣ್ಣ ಅವರು ತೀವ್ರ ತರಾಟೆಗೆ ತೆಗೆದುಕೊಂಡು, ಈ ರೈಲ್ವೆ ಗೇಟ್‌ನ ಸಮಸ್ಯೆ ಪರಿಹರಿಸಲು ಈ ಹಿಂದೆಯೇ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಮಂಜೂರಾತಿ ದೊರೆತಿದ್ದು, ಅನುದಾನವನ್ನೂ ಕೂಡ ಒದಗಿಸಲಾಗಿದೆ. ಆದರೆ ನೀವು ಯಾವುದೇ ಕ್ರಮ ಕೈಗೊಳ್ಳದೆ ಕಾಲಹರಣ ಮಾಡುತ್ತಿದ್ದೀರ, ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಅಧಿಕಾರಿಗಳಿಗೆ ಬದ್ಧತೆ ಇರಬೇಕು ಎಂದು ಅಸಮಾಧಾನ ವ್ಯಕ್ತಪಡಿಸಿ, ಒಂದು ವಾರದ ಒಳಗಾಗಿ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಬೇಕು, ತಪ್ಪಿದಲ್ಲಿ ಕ್ರಮ ಕೈಗೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಭೂಸ್ವಾಧೀನಾಧಿಕಾರಿ ವೆಂಕಟೇಶ್ ನಾಯಕ್ ಅವರು ಮಾತನಾಡಿ, ಈ ಮಾರ್ಗದಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು. ಬಳಿಕ ನಗರದ ರೈಲ್ವೆ ನಿಲ್ದಾಣಕ್ಕೆ ಭೇಟಿ ನೀಡಿ ಪರಿಶೀಲಿಸಿದ ಸಚಿವ ವಿ. ಸೋಮಣ್ಣ ಅವರು, ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೆ ಮಾರ್ಗದ ಕಾಮಗಾರಿ ಕೈಗೊಳ್ಳುವ ಸಂದರ್ಭದಲ್ಲಿ ನಗರದ ರೈಲ್ವೆ ನಿಲ್ದಾಣದಲ್ಲಿ ನಿರ್ಮಿಸಲಾಗುವ ರೈಲ್ವೆ ಲೈನ್‌ಗಳ ಬಗ್ಗೆ ಹಾಗೂ ಚಿತ್ರದುರ್ಗದ ರೈಲ್ವೆ ನಿಲ್ದಾಣವನ್ನು ಅಮೃತ್ ಭಾರತ್ ಸ್ಟೇಷನ್ ಯೋಜನೆಯಡಿ ಅಭಿವೃದ್ಧಿಪಡಿಸಲಾಗುತ್ತಿರುವ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು.

ಸಂಸದ ಗೋವಿಂದ ಎಂ. ಕಾರಜೋಳ, ರೈಲ್ವೆ ಇಲಾಖೆ ಮುಖ್ಯ ಆಡಳಿತಾಧಿಕಾರಿ (ನಿರ್ಮಾಣ) ಅಜಯ್ ಶರ್ಮಾ, ವಿಭಾಗೀಯ ರೈಲ್ವೆ ವ್ಯವಸ್ಥಾಪಕ (ಡಿಜಿಎಂ) ಮುದಿತ್ ಮಿತ್ತಲ್, ದಾವಣಗೆರೆ–ಚಿತ್ರದುರ್ಗ–ತುಮಕೂರು ರೈಲ್ವೆ ಮಾರ್ಗದ ವಿಶೇಷ ಭೂಸ್ವಾಧೀನಾಧಿಕಾರಿ ವೆಂಕಟೇಶ್ ನಾಯಕ್, ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಶಿ ಸೇರಿದಂತೆ ವಿವಿಧ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಉಜ್ಜೀವನ್ ಬ್ಯಾಂಕ್, ಪೌರಕಾರ್ಮಿಕರಿಂದ ಸ್ವಚ್ಛತಾ ಕಾರ್ಯ




**ಚಳ್ಳಕೆರೆ:** ನಗರದ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಉಜ್ಜೀವನ್ ಬ್ಯಾಂಕ್,ಪೌರಕಾರ್ಮಿಕರ ಸಹಯೋಗದೊಂದಿಗೆ ಸ್ವಚ್ಛತಾ ಕಾರ್ಯವನ್ನು ನೆರವೇರಿಸಲಾಯಿತು. ಪ್ರತಿವರ್ಷದಂತೆ ಈ ವರ್ಷವೂ ಉಜ್ಜೀವನ್ ಬ್ಯಾಂಕ್ ಸ್ವಚ್ಛತಾ ಕಾರ್ಯದ ಮೂಲಕ ಉತ್ತಮ ಪರಿಸರ ನಿರ್ಮಾಣ ಮಾಡುವಂತೆ ಸಾರ್ವಜನಿಕರಿಗೆ ಮನವಿ ಮಾಡಿಕೊಳ್ಳುತ್ತಿದೆ. ಸ್ವಚ್ಛತಾ ಕಾರ್ಯದಲ್ಲಿ ನಗರಸಭೆ ಸಿಬ್ಬಂದಿಯೂ ಸಹ ಕೈಜೋಡಿಸಿದರು.

ಬ್ಯಾಂಕ್‌ನ ಪ್ರಧಾನ ವ್ಯವಸ್ಥಾಪಕ ಬಿ.ಉಮೇಶ್. ಸಂದೀಪ್, ವರ್ಷ, ರೂಪ, ರವಿಕುಮಾರ್, ರುದ್ರೇಶ್, ನಗರಸಭೆ ಸಿಬ್ಬಂದಿಯಾದ ಶುಭಶ್ರೀ, ನವೀದಬಾಬು ಮುಂತಾದವರು ಇದ್ದರು.

### ಪ್ರತಿಭಾ ಪುರಸ್ಕಾರ

**ಚಿತ್ರದುರ್ಗ:** ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ. 2024–25 ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಶೇ.90 ಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆದಿರುವ ಜಿಲ್ಲೆಯ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ವಿದ್ಯಾರ್ಥಿಗಳು ಅಂಕಪಟ್ಟಿ ಪ್ರತಿ, ನಿವಾಸಿ ದೃಢೀಕರಣ ಪತ್ರ, ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರ ಹಾಗೂ ಎರಡು ಪಾಸ್‌ಪೋರ್ಟ್ ಅಳತೆಯ ಫೋಟೊದೊಂದಿಗೆ ದಿನಾಂಕ : 24–5–2025 ರೊಳಗಾಗಿ ರೋಟರಿ ಬಾಲಭವನ ಸಮೀಪ, ಡಿ.ಸಿ.ಸರ್ಕಲ್‌ನಲ್ಲಿರುವ ಜಿಲ್ಲಾ ವೀರಶೈವ ಲಿಂಗಾಯತ ಹೇಮರಡ್ಡಿ ಮಲ್ಲಮ್ಮ ಸಮಾಜದ ಕಚೇರಿಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

## ಪ್ರಮುಖ ಸುದ್ದಿ

# ಉತ್ತಮ ಆರೋಗ್ಯ ಕಲ್ಪಿಸಲು ನಮ್ಮ ಕ್ಲಿನಿಕ್ ಆಸ್ಪತ್ರೆ ಸಹಕಾರಿ

» ಚಳ್ಳಕೆರೆ



ರಾಜ್ಯ ಸರ್ಕಾರ ಈಗಾಗಲೇ ತನ್ನ ಎರಡು ವರ್ಷಗಳ ಆಡಳಿತ ಪೂರೈಸುತ್ತಾ ಬಂದಿದ್ದು ಈ ತಿಂಗಳ 21ರಂದು ಸರ್ಕಾರದ ಸಾಧನಾ ಸಮಾವೇಶ ನಡೆಯಲಿದೆ. ಜನತೆಗೆ ಐದು ಉತ್ತಮ ಗ್ಯಾರಂಟಿ ನೀಡಿ ಎಲ್ಲರ ಬದುಕು ಹಸನಾಗಿಸಿದ ಕೀರ್ತಿ ಸಿಎಂ ಸಿದ್ದರಾಮಯ್ಯ, ಡಿ.ಸಿಎಂ ಡಿ.ಕೆ.ಶಿವಕುಮಾರದ್ದು. ಕೇವಲ ಬದುಕಷ್ಟೇಯಲ್ಲ ಎಲ್ಲರ ಆರೋಗ್ಯವೂ ಸಹ ಸದೃಢ, ಉತ್ತಮವಾಗಿರಬೇಕೆಂಬ ಹಿನ್ನೆಲೆಯಲ್ಲಿ ನಮ್ಮ ಕ್ಲಿನಿಕ್ ಪ್ರಾರಂಭಿಸಿ ಜನರಿಗೆ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ವೆಂಕಟೇಶ್ವರ ನಗರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಪಂಚಾಯಿತ್, ತಾಲ್ಲೂಕು ಆರೋಗ್ಯ ಇಲಾಖೆ ಸಹಯೋಗದಲ್ಲಿ ನೂತನವಾಗಿ ನಮ್ಮ ಕ್ಲಿನಿಕ್ ಆಸ್ಪತ್ರೆಯಲ್ಲಿ ಉದ್ಘಾಟಿಸಿ ಮಾತನಾಡಿದರು. ಸರ್ಕಾರ ಆರೋಗ್ಯದ ವಿಚಾರದಲ್ಲಿ ಹೆಚ್ಚು ಕಾಳಜಿ ಹೊಂದಿದೆ. ವಿಶೇಷವಾಗಿ ವೆಂಕಟೇಶ್ವರನಗರ, ಡಿ.ಸುಧಾಕರನಗರ, ಅಭಿಷೇಕ್ ನಗರ, ಸೂಜಿಮಲ್ಲೇಶ್ವರನಗರ ಮುಂತಾದ ಕಡೆಗಳಿಂದ ನೂರಾರು ಕೂಲಿಕಾರ್ಮಿಕರು, ಮಧ್ಯಮ ವರ್ಗದ ಜನರು ವಾಸವಿದ್ದಾರೆ. ಇಲ್ಲಿಂದ ಸುಮಾರು ಎರಡು ಕಿ.ಮೀ ದೂರ ಸಾರ್ವಜನಿಕ ಆಸ್ಪತ್ರೆಗೆ ಹೋಗಲು ಕೆಲವೊಂದು ಸಂದರ್ಭದಲ್ಲಿ ಸಾಧ್ಯವಾಗದ ಹಿನ್ನೆಲೆಯಲ್ಲಿ ಎಲ್ಲರ ಬೇಡಿಕೆಯಂತೆ ನಮ್ಮ ಕ್ಲಿನಿಕ್ ಆರಂಬಿಸಲಾಗಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ರೇಣುಕಾಪ್ರಸಾದ್, ಜಿಲ್ಲೆಯಲ್ಲಿ ಒಟ್ಟು 6ಕಡೆ ನಮ್ಮ ಕ್ಲಿನಿಕ್ ಉದ್ಘಾಟನೆ ಮಾಡಲಾಗಿದೆ. ಕ್ಷೇತ್ರದ ಶಾಸಕರ ವಿಶೇಷ ಒತ್ತಾಯ ಹಾಗೂ ಈ ಭಾಗದ ಜನರ ಮನವಿಗೆ ಸ್ಪಂದಿಸಿ ಇಂದು ನಮ್ಮ ಕ್ಲಿನಿಕ್ ಆಸ್ಪತ್ರೆ ಉದ್ಘಾಟಿಸಿ ಸಾರ್ವಜನಿಕ ಸೇವೆಗೆ ಸಮರ್ಪಣೆ ಮಾಡಲಾಗಿದೆ.



# ಬುದ್ಧ

## ಸರ್ವೇ ಜನೋ ಸುಖಿನೋ ಭವಂತು

# ಪ್ರಜ್ಞೆಯ ಬೆಳಕಿನಲ್ಲಿ ಪಾಕಿಸ್ತಾನದ ದುಸ್ಥಿತಿ ಕಂಡಾಗ......,

ನಮ್ಮ ನೆರೆಯ ದೇಶ ಮತ್ತು ಒಂದು ಕಾಲದ ನಮ್ಮದೇ ದೇಶದ ಭಾಗವಾಗಿದ್ದ ಪಾಕಿಸ್ತಾನ ಇತ್ತೀಚಿನ ಸುದ್ದಿಗಳ ಪ್ರಕಾರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ ಮತ್ತು ದಿವಾಳಿತನದ ಅಂಚಿನಲ್ಲಿದೆ........

ದೇಶವೇ ಇರಲಿ, ವೈಯಕ್ತಿಕ ಬದುಕೇ ಇರಲಿ, ನಮ್ಮ ಕ್ರಿಯೆ ಪ್ರತಿಕ್ರಿಯೆಗಳು ನಮ್ಮ ಜೀವನಮಟ್ಟವನ್ನು ನಿರ್ಧರಿಸುತ್ತದೆ. ಅಪರೂಪದ ಕೆಲವು ಆಕಸ್ಮಿಕ ಸಂದರ್ಭಗಳಲ್ಲಿ ಮಾತ್ರ ಇದಕ್ಕೆ ಅಪವಾದ ಇರಬಹುದು......

ಧರ್ಮದ ಆಧಾರದ ಮೇಲೆ ದೇಶದ ನಿರ್ಮಾಣ, ಭಯೋತ್ಪಾದನೆಗೆ ಸಹಕಾರ, ಕೋವಿಡ್ ವೈರಸ್ ದಾಳಿ, ಅಮೆರಿಕ ದೇಶದ ವಿರೋಧದ ಕಾರಣದಿಂದ ಅವರ ನೆರವಿನ ಖೋತಾ, ದೇಶದ ರಾಜಕಾರಣಿಗಳ ಭ್ರಷ್ಟಾಚಾರ, ರಾಜಕೀಯ ಅಸ್ಥಿರತೆ ಮುಂತಾದ ಅನೇಕ ಕಾರಣಗಳಿಗಾಗಿ ಅದು ಈ ಪರಿಸ್ಥಿತಿ ತಲುಪಿರಬಹುದು....

ಇದು ಸಹ ಶಾಶ್ವತವೇನು ಅಲ್ಲ. ದೇಶ ತಪ್ಪುಗಳನ್ನು ತಿದ್ದಿಕೊಂಡು ಮುನ್ನಡೆದರೆ ಮತ್ತೆ ಕೆಲವೇ ವರ್ಷಗಳಲ್ಲಿ ಸುಸ್ಥಿತಿಗೆ ಮರಳಬಹುದು. ಹಾಗಾಗಲಿ ಎಂದು ಶುಭ ಹಾರೈಸುತ್ತಾ.......

ಮುಖ್ಯವಾಗಿ ಭಾರತದ ಕೆಲವು ಎಲೆಕ್ಟ್ರಾನಿಕ್ ಸುದ್ದಿ ಮಾಧ್ಯಮಗಳು ಪಾಕಿಸ್ತಾನದ ಆ ದುಸ್ಥಿತಿಯನ್ನು ಸಂಭ್ರಮಿಸುವ ರೀತಿಯ ಸುದ್ದಿ ಪ್ರಸಾರ ಮಾಡುವುದು ಪತ್ರಿಕಾ ಧರ್ಮಕ್ಕೆ ವಿರುದ್ಧವಾಗಿದೆ. ಒಬ್ಬ ವ್ಯಕ್ತಿ ಅಥವಾ ಒಂದು ದೇಶ ಅವರು ನಮ್ಮ ವಿರೋಧಿಗಳೇ ಆಗಿರಲಿ ಅವರಿಗೆ ಕಷ್ಟ ಬಂದಾಗ ಸಹಾಯ ಮಾಡುವುದು – ಬಿಡುವುದು ಅವರವರ ಇಚ್ಛೆ. ಆದರೆ ಕಷ್ಟದಲ್ಲಿರುವವರನ್ನು ಅವರ ಪರಿಸ್ಥಿತಿ ಕಂಡು ಹಿಯಾಳಿಸುವುದು ತಪ್ಪಾಗುತ್ತದೆ. ಮಾನವೀಯ ಧರ್ಮದ ವಿರೋಧವಾಗುತ್ತದೆ....

ಅದಕ್ಕೆ ಬದಲಾಗಿ ಭಾರತ ಪಾಕಿಸ್ತಾನಕ್ಕೆ ಮುಖ್ಯವಾಗಿ ಅದರ ಪುನಃಶ್ಚೇತನಕ್ಕೆ ಸ್ವಲ್ಪ ಸಹಾಯ ಮಾಡಿದರೆ ಖಂಡಿತ ಬಹಳಷ್ಟು ಪಾಕಿಸ್ತಾನಿಯರಲ್ಲಿ ಭಾರತದ ಬಗ್ಗೆ ಇರುವ ದ್ವೇಷ ಕಡಿಮೆಯಾಗಿ ಒಂದಷ್ಟು ಪ್ರೀತಿ ಅಭಿಮಾನ ಬೆಳೆಯಬಹುದು.....

ಇಡೀ ಪಾಕಿಸ್ತಾನದ ಜನರೆಲ್ಲಾ ಭಯೋತ್ಪಾದಕರಲ್ಲ. ಎಲ್ಲೋ ಕೆಲವು ಧರ್ಮಾಂಧರು ಮಾತ್ರ ದಾರಿ ತಪ್ಪಿದ್ದಾರೆ ಮತ್ತು ಭಾರತಕ್ಕೆ ಅಪಾಯಕಾರಿಯಾಗಿದ್ದಾರೆ. ಪಾಕಿಸ್ತಾನ ಸಹ ಭಯೋತ್ಪಾದನೆಯಿಂದ ಸಾಕಷ್ಟು ನಲುಗಿದೆ.....

ಪಾಕಿಸ್ತಾನದಲ್ಲಿಯೂ ಕುಟುಂಬ, ಪ್ರೀತಿ, ಸಂಬಂಧಗಳು, ಸಂಸ್ಕಾರಗಳು, ಭಾವನೆಗಳು ಎಲ್ಲವೂ ನಮ್ಮಂತೆಯೇ ಇರುತ್ತದೆ. ಎಲ್ಲಾ ನಾಗರಿಕತೆಗಳಲ್ಲೂ ಮನುಷ್ಯ ಭಾವನೆಗಳು ಬಹುತೇಕ ಒಂದೇ ರೀತಿಯಲ್ಲಿ ಇರುತ್ತದೆ. ಸ್ವಲ್ಪ ರೂಪ ಮತ್ತು ಭಾವ ತೀವ್ರತೆಯಲ್ಲಿ ವ್ಯತ್ಯಾಸ ಇರಬಹುದು.....

ಕಷ್ಟದ ಸಮಯದ ಸಹಾಯ ಎಂತಹ ಕಲ್ಲು ಹೃದಯವನ್ನು ಕರಗಿಸಬಲ್ಲದು. ಆದರೆ ಮಾಧ್ಯಮಗಳು ಸಾಮಾನ್ಯ ಹೃದಯವನ್ನು ಕಲ್ಲು ಹೃದಯವಾಗಿ ಮಾರ್ಪಡಿಸುವ ದ್ವೇಷ ಅಸೂಯೆ ರೀತಿಯ ವಿಷಯಗಳನ್ನು ಪ್ರಸ್ತಾಪ



ಮಾಡಿ ಸಾಮಾನ್ಯ ಜನರ ಉರಿಯುವ ಮನಸ್ಸುಗಳ ಬೆಂಕಿಗೆ ತುಪ್ಪ ಸುರಿಯುವ ಕೆಲಸ ಮಾಡುತ್ತಿರುವುದು ಅವರು ಬಹುತೇಕ ನಾಗರಿಕ ಸಮಾಜದಿಂದ ದೂರ ಸರಿಯುತ್ತಿರುವ ಲಕ್ಷಣಗಳು ಕಾಣಿಸುತ್ತಿವೆ......

ಯಾವುದೇ ಪರಿಸ್ಥಿತಿಯಲ್ಲಿ ಕ್ರಿಯೆ ಪ್ರತಿಕ್ರಿಯೆಗಳು ನಮ್ಮ ಯೋಗ್ಯತೆಯನ್ನು ಸಹ ಅನಾವರಣ ಮಾಡುತ್ತವೆ. ಅದರ ಅರಿವು ಸದಾ ಜಾಗೃತಾವಸ್ಥೆಯಲ್ಲಿ ಇರಲಿ. ನಮ್ಮ ನೆರೆಹೊರೆಯವರು ಸಂಪೂರ್ಣ ದಿವಾಳಿಯಾದರೆ ಅದರ ದುಷ್ಪರಿಣಾಮ ನಮಗೂ ತಟ್ಟುತ್ತದೆ ಬೇರೆ ರೀತಿಯಲ್ಲಿ....

ಮಾಧ್ಯಮಗಳ ಪ್ರೇರಿತ ಅಭಿಪ್ರಾಯಗಳು ಅತ್ಯಂತ ಅಪಾಯಕಾರಿಯಾಗುತ್ತಿರುವ ಸನ್ನಿವೇಶದಲ್ಲಿ ಬುದ್ಧನ ಸಂದೇಶಗಳು ನಮ್ಮ ಎದೆಯೊಳಗೆ ಬೆಳಗುತ್ತಿರಲಿ......

ಬುದ್ಧ ಪೂರ್ಣಿಮೆಯ ಮುನ್ನ ಬುದ್ಧ ಪ್ರಜ್ಞೆ ಜಾಗೃತವಾಗಲಿ ಎಂದು ಆಶಿಸುತ್ತಾ.....ದ್ವೇಷ ಅಸೂಯೆಯ ಬೆಂಕಿ ತನ್ನನ್ನೂ ಸುಡುತ್ತದೆ ಎಂದು ಎಚ್ಚರಿಸುತ್ತಾ......ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,ಮನಸ್ಸುಗಳ ಅಂತರಂಗದ ಚಳವಳಿ,



» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

### ವಚನ ಸಂಸ್ಕೃತಿಯಾತ್ರೆಯಲ್ಲಿ ಫ್ರಾನ್ಸ್ ಕನ್ನಡತಿ ಡಾ. ವಸುಂಧರಾ ಫಿಲಿಯೋಜಾ ಅಭಿಮತ.

# ಹಂಪಿಯನ್ನು ಕರ್ನಾಟಕ ಸಾಮ್ರಾಜ್ಯವೆಂದು ಬಣ್ಣಿಸಿ

» **ಹೊಸದುರ್ಗ**

ವಿಜಯನಗರದ ಸಾಮ್ರಾಜ್ಯವನ್ನು ಕರ್ನಾಟಕ ಸಾಮ್ರಾಜ್ಯ ಎಂದು ಬಣ್ಣಿಸುವುದು ಸೂಕ್ತ ಎಂದು ಫ್ರಾನ್ಸ್ ಕನ್ನಡತಿ ಹಾಗೂ ಹಿರಿಯ ಸಂಶೋಧಕರಾದ ಡಾ. ವಸುಂಧರಾ ಫಿಲಿಯೋಜಾ ಅಭಿಪ್ರಾಯ ವ್ಯಕ್ತಪಡಿಸಿದರು.

ಬೆಂಗಳೂರಿನ ರಾಷ್ಟ್ರೀಯ ಬಸವ ಪ್ರತಿಷ್ಠಾನ ಹಾಗೂ ಫ್ರಾನ್ಸ್ ಕನ್ನಡ ಬಳಗದ ಸಹಯೋಗದೊಂದಿಗೆ ಆಯೋಜಿಸಿದ್ದ ಭಾರತ ವಚನ ಸಂಸ್ಕೃತಿ ಯಾತ್ರಾ – 2025 ರ 'ರಾಷ್ಟ್ರೀಯ ಬಸವ ಪುರಸ್ಕಾರ' ಸ್ವೀಕರಿಸಿ ಮಾತನಾಡಿದರು.

ಬಸವಣ್ಣನವರ ವಚನಗಳನ್ನು ಪ್ರೆಂಚ್ ಭಾಷೆಗೆ ಅನುವಾದಿಸಿದ್ದಲ್ಲದೆ, ಕಳೆದ 6 ದಶಕದಿಂದ ಭಾರತೀಯ ಸಂಸ್ಕೃತಿ, ಕನ್ನಡ ಭಾಷೆ ಹಾಗೂ ಕಲೆಗಳ ಸಂರಕ್ಷಣೆಗಾಗಿ ಶ್ರಮಿಸಿರುವುದನ್ನು ಗಮನಿಸಿ, ಈ ಪುರಸ್ಕಾರ ನೀಡಲಾಯಿತು.



ಖ್ಯಾತ ನಟಿ ಹಾಗೂ ಶಾಸಕಿ ಉಮಾಶ್ರೀ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಬಸವಣ್ಣನವರು ಕೇವಲ ಕರ್ನಾಟಕದ ಸಾಂಸ್ಕೃತಿಕ ನಾಯಕರಲ್ಲ, ವಿಶ್ವದ ನಾಯಕ. ಎಸ್.ಎಂ.ಸುರೇಶ್ ಅವರು ತಮ್ಮ ರಾಷ್ಟ್ರೀಯ ಬಸವ ಪ್ರತಿಷ್ಠಾನದ ಮೂಲಕ ಈ ಕಾರ್ಯಕ್ರಮ ಆಯೋಜನೆ ಮಾಡಿ ಯುರೋಪಿನ ಸಂಸ್ಕೃತಿ ಪರಿಚಯಿದ್ದು ಅಭಿನಂದನೀಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಹಿತಿ, ವಚನ ಟಿವಿ ಸಂಸ್ಥಾಪಕ ಪ್ರೊ. ಸಿದ್ದು ಯಾಪಲಪರವಿ ಮಾತನಾಡಿ, ಭಾರತೀಯ ಮೂಲದ ಡಾ. ಮಹೇಶ್ ಘಟರಡ್ಡಿಹಾಳ ಈ ಪ್ರದೇಶದಲ್ಲಿ ಯೋಗದ ಪರಿಚಯ ಮಾಡಿ, ಭಾರತದ ಹಿರಿಮೆಯನ್ನು ಹೆಚ್ಚಿಸಿದ್ದಾರೆ. ಅದೇ ಮಾದರಿಯಲ್ಲಿಡಾ.ವಸುಂಧರಾಫಿಲಿಯೋಜಾ ಅವರು ಶ್ರಮಿಸಿ ಕನ್ನಡತನ ಮೆರೆದಿದ್ದಾರೆ. ರಾಷ್ಟ್ರೀಯ ಬಸವ ಪ್ರತಿಷ್ಠಾನದ ಸಂಸ್ಥಾಪಕ ಎಸ್.ಎಂ.ಸುರೇಶ್ ಇದನ್ನು ಸಾಂಸ್ಕೃತಿಕ ಯಾತ್ರೆಯನ್ನಾಗಿಸಲು ಯಶ ಸಾಧಿಸಿದ್ದಾರೆ. ಸಾಣೇಹಳ್ಳಿ ಶ್ರೀಗಳ ಸಾನಿಧ್ಯ ಈ ಪ್ರವಾಸದ ಘನತೆಯನ್ನು ಹೆಚ್ಚಿಸಿದೆ. ಫ್ರಾನ್ಸ್ ಕನ್ನಡಿಗರ ಭಾಷಾ ಪ್ರೇಮ ಅನುಕರಣೀಯವೆಂದು ಮೆಚ್ಚುಗೆ ವ್ಯಕ್ತಪಡಿಸಿದರು. ಸಾಣೇಹಳ್ಳಿ ಮಠದ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಕಾರ್ಯಕ್ರಮದ ಸಾನಿಧ್ಯವಹಿಸಿ, ಆಶೀರ್ವಚನ ನೀಡಿದರು. ಬೆಟ್ಟದಹಳ್ಳಿಯ ಶ್ರೀ ಚಂದ್ರಶೇಖರ ಸ್ವಾಮೀಜಿ, ರಾಷ್ಟ್ರೀಯ ಬಸವ ಪ್ರತಿಷ್ಠಾನದ ಅಧ್ಯಕ್ಷ, ಟಿಸಿಎಸ್ ಡ್ರೀಮ್ ಹಾಲಿಡೇಸ್ ಸಂಸ್ಥಾಪಕ ಪ್ರಾಸ್ತಾವಿಕ ಮಾತನಾಡಿ, ಸರ್ವರನ್ನು ಸ್ವಾಗತಿಸಿದರು. ವೇದಿಕೆ ಮೇಲೆ ಸಾಹಿತಿಗಳಾದ ಪ್ರೊ.ಬಿ.ಆರ್. ಪೋಲಿಸ್‌ಪಾಟೀಲ, ಜಾಗತಿಕ ಲಿಂಗಾಯತ ಮಹಾಸಭಾದ ಬಸವರಾಜ ರೊಟ್ಟಿ, ಸಾಹಿತಿ ಅಶೋಕ ಮಳಗಲಿ, ಎಸ್. ಮಂಜುನಾಥ, ಫ್ರಾನ್ಸ್ ಕನ್ನಡ ಬಳಗದ ನವೀನ್,ಶಿವಕುಮಾರ್, ಸುಚಿತ್ರಾ ರಾವ್, ಸಾಗರ್ ಉದಯಕುಮಾರ್ ಇತರರು ಉಪಸ್ಥಿತರಿದ್ದರು.

ಾಂಸ್ಕೃತಿಕ ಕಾರ್ಯಕ್ರಮಗಳು– ಫ್ರಾನ್ಸ್ ಕನ್ನಡ ಬಳಗವು ವಚನ ವೈಭವದ ನೃತ್ಯ ಪ್ರದರ್ಶನ ನೀಡಿದ್ದು ವಿಶೇಷ. ಸಾಣೇಹಳ್ಳಿಯ ಶ್ರೀ ಶಿವಕುಮಾರ ಕಲಾ ಸಂಘದ ಕಲಾವಿದರು ಹಾಗೂ ಪ್ರವಾಸಿಗರು 'ಮಹಾಬೆಳಕು' ನಾಟಕದಲ್ಲಿ ಅಭಿನಯಿಸಿ ಎಲ್ಲರ ಮನ ಸೂರೆಗೊಂಡರು. ನಡುಗುವ ಛಳಿಯಲ್ಲಿ ಮೈಮನ ಪುಳಕಗೊಳಿಸಿದ ಸಾಂಸ್ಕೃತಿಕ ವಿನಿಮಯ ಕಾರ್ಯಕ್ರಮ ಇದಾಗಿತ್ತು. ಸಾಕ್ಷಿ ಎ. ಮಲ್ಲಿಗೆರೆ ಕಾರ್ಯಕ್ರಮವನ್ನು ನಿರೂಪಿಸಿದರು. ಪ್ರಸನ್ನಕುಮಾರ ಮರಡಿ ವಂದಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T